**Akashvani : Bangalore**
**Regional Bulletin In Kannada**
**15.07.2025 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**15.07.2025 / 18.40 hrs**
**<><*<><>*><>**

**<u>ಮುಖ್ಯಾಂಶಗಳು</u>**

**೧. ಹೃದಯಾಘಾತದಿಂದ ಸಾವುಗಳ ಸಂಖ್ಯೆ ಹೆಚ್ಚಾಗಿಲ್ಲ ; ಯಾವುದೇ ಆತಂಕ ಬೇಡ - ಸಚಿವ ಶರಣಪ್ರಕಾಶ್ ಪಾಟೀಲ್**

**೨. ಗ್ರೇಟರ್ ಬೆಂಗಳೂರು ಪ್ರಾಧಿಕಾರದಲ್ಲಿ ೫ ಪಾಲಿಕೆ ರಚನೆ ಮಾಡಿ ಶೀಘ್ರವೇ ಚುನಾವಣೆ ನಡೆಸಲು ಸರ್ಕಾರ ನಿರ್ಧಾರ**

**೩. ಹದಿನೆಂಟು ದಿನಗಳ ಬಳಿಕ ಬಾಹ್ಯಾಕಾಶದಿಂದ ಭೂಮಿಗೆ ಮರಳಿದ ಶುಭಾಂಶು ಶುಕ್ಲಾ**

**೪. ಬೆಂಗಳೂರು ಕಾಲ್ತುಳಿತ ಪ್ರಕರಣ ; ಕೆಎಸ್‌ಸಿಎ, ಆರ್‌ಸಿಬಿ, ಡಿಎನ್‌ಎ ಜೊತೆ ವರದಿ ಹಂಚಿಕೊಳ್ಳುವಂತೆ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ**

**೫. ಸಿಗಂದೂರು ಸೇತುವೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಶಿಷ್ಟಾಚಾರ ಉಲ್ಲಂಘನೆಯಾಗಿಲ್ಲ ; ಪ್ರತಿಪಕ್ಷ ನಾಯಕ ಆರ್. ಅಶೋಕ**

**<><*<><>*><>**

ರಾಜ್ಯದಲ್ಲಿ ಹೆಚ್ಚಾಗುತ್ತಿರುವ ಹೃದಯಾಘಾತ ಪ್ರಕರಣಗಳ ಕುರಿತು ಜನರು ಆತಂಕ ಪಡುವ ಅಗತ್ಯವಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಸರಾಸರಿ ಹೃದಯಾಘಾತದ ಪ್ರಕರಣಗಳು ಕಳೆದ ವರ್ಷದಷ್ಟೇ ಇದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರೊಂದಿಗೆ ಜಂಟಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಸಚಿವರು, ಸರ್ಕಾರ ಈ ವಿಷಯದಲ್ಲಿ ಸೂಕ್ತ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದ್ದಾರೆ. ಕೋವಿಡ್ ಲಸಿಕೆಗೂ ಹಾಸನದಲ್ಲಿ ಸಂಭವಿಸಿದ ಹೃದಯಾಘಾತ ಪ್ರಕರಣಗಳಿಗೂ ಯಾವುದೇ ಸಂಬಂಧವಿಲ್ಲ. ವ್ಯಾಕ್ಸಿನ್ ಬಗ್ಗೆ ಅನುಮಾನ ಬೇಡ ಎಂದು ಪುನರುಚ್ಚರಿಸಿದ್ದಾರೆ. ಹೃದಯಾಘಾತದ ರೋಗ ಲಕ್ಷಣಗಳು ಇದ್ದರೆ ಮಾತ್ರ ಆಸ್ಪತ್ರೆಗೆ ಹೋಗಿ ತಪಾಸಣೆ ಮಾಡಿಸಿಕೊಳ್ಳಿ ಎಂದು ಸಲಹೆ ನೀಡಿದ್ದಾರೆ. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾತನಾಡಿ, ಮಕ್ಕಳಲ್ಲಿ ಸ್ಕ್ರೀನಿಂಗ್ ಮಾಡುವ ಆಗತ್ಯವಿಲ್ಲ. ರಸ್ತೆ ಬದಿ ಆಹಾರ ಮತ್ತು ಆಹಾರ ತಯಾರಿಸುವ ವಿಧಾನದ ಬಗ್ಗೆ ಕಟ್ಟುನಿಟ್ಟಿನ ಕ್ರಮ ವಹಿಸಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಡಿಯಲ್ಲಿ ಐದು ಪಾಲಿಕೆ ರಚನೆ ಮಾಡಿ, ಶೀಘ್ರವೇ ಚುನಾವಣೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ರಾಜ್ಯ, ಜಿಲ್ಲೆ, ತಾಲೂಕು ಮಟ್ಟದ ಪದಾಧಿಕಾರಿಗಳ ಸಮಾವೇಶದಲ್ಲಿ ಮಾತನಾಡಿದ ಅವರು, ಕೆಲವರು ಸಾರ್ವಜನಿಕವಾಗಿ ವಿರೋಧ ಮಾಡಬಹುದು. ಆದರೆ ಆಡಳಿತ ದೃಷ್ಟಿಯಿಂದ ಇದನ್ನು ಮಾಡಲೇಬೇಕಾಗಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಈ ದೇಶದ ಇತಿಹಾಸದಲ್ಲಿ ಕಾಂಗ್ರೆಸ್ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಬಿಸಿಯೂಟ, ಅನ್ನಭಾಗ್ಯ ಇದೆಲ್ಲವೂ ಕ್ರಾಂತಿಕಾರಕ ಯೋಜನೆಗಳಾಗಿವೆ. ಹಟ್ಟಿ, ತಾಂಡಾಗಳಲ್ಲಿ ವಾಸವಿರುವ ಜನರಿಗೂ ಈಗ ಭೂ ದಾಖಲೆಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

**<><*<><>*><>**

ಹದಿನೆಂಟು ದಿನಗಳ ಬಳಿಕ ಬಾಹ್ಯಾಕಾಶದಿಂದ ಭಾರತದ ಶುಭಾಂಶು ಶುಕ್ಲಾ ಸೇರಿದಂತೆ ನಾಲ್ವರು ಗಗನಯಾತ್ರಿಗಳು ಭೂಮಿಗೆ ಬಂದಿಳಿದಿದ್ದಾರೆ. ಕ್ಯಾಲಿಫೋರ್ನಿಯ ಸಮುದ್ರದಲ್ಲಿ ಭೂಸ್ಪರ್ಶವಾದ ಬಳಿಕ ನಾಲ್ವರು ಗಗನಯಾತ್ರಿಗಳು ಡ್ರ್ಯಾಗನ್ ಕ್ಯಾಪ್ಸೂಲ್‌ನಿಂದ ನಗುತ್ತ ಹೊರ ಬಂದಿದ್ದಾರೆ. ೪೧ ವರ್ಷಗಳ ನಂತರ ಬಾಹ್ಯಾಕಾಶಕ್ಕೆ ಪ್ರಯಾಣಿಸಿದ ೨ನೇ ಭಾರತೀಯ ಗಗನಯಾತ್ರಿ ಹಾಗೂ ಐಎಸ್‌ಎಸ್‌ಗೆ ಭೇಟಿ ನೀಡಿದ ಮೊದಲ ಭಾರತೀಯರಾಗಿದ್ದಾರೆ. ಈ ಮೂಲಕ ಶುಕ್ಲಾ ಬಾಹ್ಯಾಕಾಶ ಯಾನದಲ್ಲಿ ಹೊಸ ದಾಖಲೆ ಬರೆದಿದ್ದಾರೆ. ಯಶಸ್ವಿ ಬಾಹ್ಯಾಕಾಶ ಯಾತ್ರೆಯನ್ನು ಮುಗಿಸಿ, ಸುರಕ್ಷಿತವಾಗಿ ಭೂಮಿಗೆ ಮರಳಿದ ಶುಭಾಂಶು ಶುಕ್ಲಾ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿನಂದಿಸಿದ್ದಾರೆ. ಇಡೀ ರಾಷ್ಟ್ರ ಈ ಐತಿಹಾಸಿಕ ಕ್ಷಣಗಳನ್ನು ಕಣ್ತುಂಬಿಕೊಂಡು ಹೆಮ್ಮೆಪಡುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಕಾಲ್ತುಳಿತ ಪ್ರಕರಣದ ವರದಿಯನ್ನು ಕೆಎಸ್‌ಸಿಎ-ಆರ್‌ಸಿಬಿ ಹಾಗೂ ಡಿಎನ್‌ಎ ಜೊತೆ ಹಂಚಿಕೊಳ್ಳುವಂತೆ ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚಿಸಿದೆ. ಹಂಗಾಮಿ ಮುಖ್ಯ ನ್ಯಾಯಮೂರ್ತಿ ವಿ. ಕಾಮೇಶ್ವರ ರಾವ್ ಮತ್ತು ನ್ಯಾಯಮೂರ್ತಿ ಸಿ.ಎಂ. ಜೋಶಿ ನೇತೃತ್ವದ ಪೀಠವು ವರದಿಯನ್ನು ತಡೆ ಹಿಡಿದಿದ್ದಕ್ಕಾಗಿ ರಾಜ್ಯ ಸರ್ಕಾರದ ಸಮರ್ಥನೆಯನ್ನು ತಿರಸ್ಕರಿಸಿ ವರದಿಯನ್ನು ಮೂರು ಸಂಸ್ಥೆಗಳಿಗೆ ನೀಡುವಂತೆ ನಿರ್ದೇಶನ ನೀಡಿದೆ. ಪ್ರಕರಣವು ಸಾರ್ವಜನಿಕ ಹಿತಾಸಕ್ತಿ, ರಾಷ್ಟ್ರೀಯ ಭದ್ರತೆ ಅಥವಾ ಖಾಸಗಿ ಹಕ್ಕುಗಳ ವರ್ಗಗಳ ಅಡಿಯಲ್ಲಿ ಬರುವುದಿಲ್ಲ ಎಂದು ಪೀಠ ಅಭಿಪ್ರಾಯಪಟ್ಟಿದೆ.

<><*<><>*><>

ರಾಜ್ಯದಿಂದಲೇ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುವ ಭಕ್ತರ ಅನುಕೂಲಕ್ಕಾಗಿ ಮಂತ್ರಾಲಯದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಸತಿ ಗೃಹಗಳ ವ್ಯವಸ್ಥೆಗೆ ಕ್ರಮವಹಿಸುವುದಾಗಿ ಸಾರಿಗೆ ಮತ್ತು ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಮಂತ್ರಾಲಯದ ಕರ್ನಾಟಕ ಛತ್ರದಲ್ಲಿ ಧಾರ್ಮಿಕ ದತ್ತಿ ಇಲಾಖೆಯಿಂದ ನಿರ್ಮಾಣ ಮಾಡಿರುವ ನೂತನ ಹಾಗೂ ಹಳೆ ಕಟ್ಟಡಗಳ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಈಗಿರುವ ಕರ್ನಾಟಕ ರಾಜ್ಯ ವಸತಿ ಗೃಹ ಕಟ್ಟಡದ ಕಳಪೆ ಕಾಮಗಾರಿಯ ಬಗ್ಗೆ ಲೋಕಾಯುಕ್ತಕ್ಕೆ ದೂರು ಸಲ್ಲಿಕೆಯಾಗಿದೆ. ಕಳಪೆ ಕಾಮಗಾರಿ ನಡೆದಿದೆ ಎಂದು ಸಾಬೀತಾದಲ್ಲಿ ಸಂಬಂಧಿಸಿದ ಗುತ್ತಿಗೆದಾರರಿಂದಲೇ ಕಟ್ಟಡದ ದುರಸ್ತಿ ಮಾಡಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ನಬಾರ್ಡ್‌ನ ೪೪ನೇ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಬೆಂಗಳೂರಿನಲ್ಲಿಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಅಧ್ಯಕ್ಷ ಶ್ರೀಕಾಂತ್ ಎಂ.ಭಂಡಿವಾಡ್, ಉಪ ಪ್ರಧಾನ ವ್ಯವಸ್ಥಾಪಕ ಶ್ರೀಜಾ ನಾಯರ್, ಆರ್‌ಬಿಐನ ಪ್ರಾದೇಶಿಕ ನಿರ್ದೇಶಕರಾದ ಸೋನಾಲಿ ಸೇನ್ ಗುಪ್ತಾ, ಕೆನರಾ ಬ್ಯಾಂಕ್‌ನ ಕಾರ್ಯಕಾರಿ ನಿರ್ದೇಶಕ ಭವೇಂದ್ರ ಕುಮಾರ್ ಸೇರಿದಂತೆ ಬ್ಯಾಂಕಿಂಗ್ ವಲಯದ ಹಿರಿಯ ಅಧಿಕಾರಿಗಳು, ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರು ಹಾಗೂ ಸಹಕಾರಿ ಮತ್ತು ಬ್ಯಾಂಕಿಂಗ್ ವಲಯದ ಪ್ರತಿನಿಧಿಗಳು ಭಾಗಿಯಾಗಿದ್ದರು. ಶಾಲಿನಿ ರಜನೀಶ್ ಮಾತನಾಡಿ, ನಬಾರ್ಡ್ ವಿಶೇಷ ಯೋಜನೆಗಳ ಮೂಲಕ ರಾಜ್ಯದ ಎಲ್ಲಾ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಒತ್ತು ನೀಡಿದೆ. ಈ ನಿಟ್ಟಿನಲ್ಲಿ ಇನ್ನಷ್ಟು ಕೆಲಸಕಾರ್ಯಗಳು ಆಗಬೇಕು ಎಂದು ತಿಳಿಸಿದರು.

<><*<><>*><>

ಸಿಗಂದೂರು ಸೇತುವೆ ಉದ್ಘಾಟನಾ ಕಾರ್ಯಕ್ರಮದಲ್ಲಿ ಯಾವುದೇ ಶಿಷ್ಟಾಚಾರ ಉಲ್ಲಂಘನೆ ಆಗಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಮೊಸರಲ್ಲಿ ಕಲ್ಲು ಹುಡುಕುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದ್ದಾರೆ. ಸೇತುವೆ ನಿರ್ಮಾಣದ ಕ್ರೆಡಿಟ್ ಬಿಜೆಪಿಗೆ ಹೋಗುತ್ತಿದೆ ಎನ್ನುವ ಹತಾಶೆಯಿಂದ ಮುಖ್ಯಮಂತ್ರಿ ಗೊಂದಲ ಸೃಷ್ಟಿ ಮಾಡುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಎರಡು ವರ್ಷ ಆದರೂ ಸರ್ಕಾರ ಇದುವರೆಗೂ ವಿರೋಧ ಪಕ್ಷದ ನಾಯಕನಿಗೆ ಅಧಿಕೃತ ಸರ್ಕಾರಿ ನಿವಾಸ ನೀಡಿಲ್ಲ. ಇದು ಕಾಂಗ್ರೆಸ್ ಪಕ್ಷ ಶಿಷ್ಟಾಚಾರ ಪಾಲನೆ ಮಾಡುವ ಪರಿ ಎಂದು ಟೀಕಿಸಿದ್ದಾರೆ.

<><*<><>*><>

ಇಹಲೋಕ ತ್ಯಜಿಸಿದ ಕನ್ನಡದ ಹಿರಿಯ ನಟಿ ಬಿ.ಸರೋಜಾದೇವಿ ಅವರ ಅಂತ್ಯಕ್ರಿಯೆ ಚನ್ನಪಟ್ಟಣದ ದಶವಾರದಲ್ಲಿ ನಡೆಯಿತು. ಅವರ ತಾಯಿಯ ಸಮಾಧಿ ಪಕ್ಕದಲ್ಲಿ ಸಕಲ ಸರ್ಕಾರಿ ಗೌರವಗಳೊಂದಿಗೆ ಅಂತ್ಯಕ್ರಿಯೆ ನೆರವೇರಿತು. ಅಂತ್ಯ ಸಂಸ್ಕಾರಕ್ಕೂ ಮುನ್ನ ಅವರ ಪಾರ್ಥಿವ ಶರೀರವನ್ನು ಮೆರವಣಿಗೆ ಮೂಲಕ ತರಲಾಯಿತು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಂಸದ ಡಾ. ಸಿ.ಎನ್. ಮಂಜುನಾಥ್ ಉಪಸ್ಥಿತರಿದ್ದರು.

**<><*<><>*><>**

ಮಾವಿನ ದರ ಕುಸಿತದಿಂದ ಕಂಗಾಲಾಗಿ ಸಂಕಷ್ಟದಲ್ಲಿದ್ದ ಮಾವು ಬೆಳೆಗಾರರ ನೆರವಿಗೆ ಕೇಂದ್ರ ಸರ್ಕಾರ ಬಂದಿದ್ದು, ಮಾರುಕಟ್ಟೆ ಮಧ್ಯೆ ಪ್ರವೇಶ ಯೋಜನೆಯಡಿ ಪ್ರತಿ ಕೆಜಿ ಮಾವಿಗೆ ೪ ರೂಪಾಯಿಯಂತೆ ಟನ್‌ವೊಂದಕ್ಕೆ ೪ ಸಾವಿರ ರೂಪಾಯಿಗಳ ಬೆಂಬಲ ಬೆಲೆಯನ್ನು ಘೋಷಿಸಲಾಗಿದೆ. ಇದಕ್ಕೆ  ಚಿಕ್ಕಬಳ್ಳಾಪುರ ಜಿಲ್ಲೆಯ ರೈತರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

**ರೈತ : ನಂಜುಂಡಪ್ಪ ( ೨೦ ಸೆಕೆಂಡ್ಸ್)**

ಜಿಲ್ಲೆಯಲ್ಲಿ ಈವರೆಗೆ ಸುಮಾರು ೧ ಸಾವಿರದ ೭೦೦ ಕ್ಕೂ ಹೆಚ್ಚು ರೈತರು ೩ ಸಾವಿರ ಕ್ವಿಂಟಲ್‌ಗೂ ಹೆಚ್ಚು ಮಾವನ್ನು ಮಾರಾಟಮಾಡಿದ್ದಾರೆ. ಮಾರಾಟ ಮಾಡಿದ ರೈತರಿಗೆ ಮಾವು ಅಭಿವೃದ್ಧಿ ಮಂಡಳಿ ಮೂಲಕ ಒಂದು ವಾರದಲ್ಲಿ ಬೆಂಬಲ ಬೆಲೆ ಹಣ ಬ್ಯಾಂಕ್ ಖಾತೆಗೆ ಜಮೆ ಆಗಲಿದೆ ಎಂದು ತೋಟಗಾರಿಕೆ ಇಲಾಖೆ ಜಿಲ್ಲಾ ಉಪ ನಿರ್ದೇಶಕಿ ಗಾಯಿತ್ರಿ ತಿಳಿಸಿದ್ದಾರೆ.

**ಧ್ವನಿ : ಗಾಯತ್ರಿ  ( ೩೦ ಸೆಕೆಂಡ್ಸ್)**

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲ್ಲೂಕಿನ ರಾಜಘಟ್ಟ ಗ್ರಾಮ ಬೂದಿಗುಂಡಿಯಲ್ಲಿ ಬೌದ್ಧನೆಲೆಯ ಕುರಿತಾದ ಸ್ತೂಪಗಳು, ಹಾಗೂ ವಿವಿಧ ಅವಶೇಷಗಳು ಪತ್ತೆಯಾಗಿದೆ. ಈ ಬಗ್ಗೆ ಸಂಶೋಧನೆಗಳನ್ನು ಕೈಗೊಳ್ಳುವ ನಿಟ್ಟಿನಲ್ಲಿ ಬೆಂಗಳೂರು ಗ್ರಾಮಾಂತರ  ಜಿಲ್ಲಾಡಳಿತ, ಪ್ರವಾಸೋದ್ಯಮ ಇಲಾಖೆ. ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಬೌದ್ಧನೆಲೆಯ ಕುರಿತಾದ ಉತ್ಖನನಕ್ಕೆ  ನಾಳೆ ಚಾಲನೆ ದೊರೆಯಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**